**All India Radio: Bangalore**
**National Bulletin In Kannada**
**25.01.2025 15.00 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಇಂದು ೧೫ನೇ ರಾಷ್ಟ್ರೀಯ ಮತದಾರರ ದಿನ; ರಾಷ್ಟ್ರಪತಿಗಳಿಂದ ನೂತನ ಯುವ ಮತದಾರರಿಗೆ ಎಪಿಕ್ ಕಾರ್ಡ್ ನೀಡಿ ಪ್ರೋತ್ಸಾಹ
2. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ - ಇಂಡೋನೇಷ್ಯಾ ಅಧ್ಯಕ್ಷ ಪ್ರಬವೊ ಸುಬಿಯಾಂತೊ ದ್ವಿಪಕ್ಷೀಯ ಮಾತುಕತೆ
3. ಮುಂಬೈ ಭಯೋತ್ಪಾದನಾ ದಾಳಿಯ ಅಪರಾಧಿ ತಹವ್ವೂರ್ ರಾಣಾ ಹಸ್ತಾಂತರಕ್ಕೆ ಅಮೆರಿಕ ಸುಪ್ರೀಂಕೋರ್ಟ್ ಅನುಮತಿ
4. ವಿದೇಶಾಂಗ ವ್ಯವಹಾರಗಳ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಳೆಯಿಂದ ಎರಡು ದಿನಗಳ ಚೀನಾ ಪ್ರವಾಸ
5. ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್; ಚೆನ್ನೈನಲ್ಲಿಂದು ಭಾರತ-ಇಂಗ್ಲೆಂಡ್ ಹಣಾಹಣಿ

**<><><><>**

ದೇಶಾದ್ಯಂತ ಇಂದು ೧೫ನೇ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯಲ್ಲಿ ನಡೆದ ಮುಖ್ಯ ಸಮಾರಂಭದಲ್ಲಿ ಪಾಲ್ಗೊಂಡು ಅವರು, ಹೊಸದಾಗಿ ಮತದಾರರಾಗಿರುವ ಯುವಕರಿಗೆ ಅವರ ಎಪಿಕ್ ಕಾರ್ಡ್‌ಗಳನ್ನು ನೀಡಿ, ಮತದಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಪ್ರೋತ್ಸಾಹಿಸಿದರು. ಕಾರ್ಯಕ್ರಮದಲ್ಲಿ ಸುಗಮ ಚುನಾವಣೆ ಖಚಿತ ಪಡಿಸಿಕೊಳ್ಳುವಲ್ಲಿ ಗಣನೀಯ ಕೊಡುಗೆ ನೀಡಿದ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ರಾಷ್ಟ್ರಪತಿಗಳು ಅತ್ಯುತ್ತಮ ಚುನಾವಣಾ ಅಭ್ಯಾಸ ಪ್ರಶಸ್ತಿ ಪ್ರದಾನ ಮಾಡಿದರು. ಬಳಿಕ ಮಾತನಾಡಿದ ಅವರು, ಭಾರತದ ಮತದಾನ ದಿನದ ವ್ಯವಸ್ಥೆಯನ್ನು ಶ್ಲಾಘಿಸಿದರು. ಕೇಂದ್ರ ಕಾನೂನು ಹಾಗೂ ನ್ಯಾಯ ಸಚಿವ, ಅರ್ಜುನ್ ರಾಮ್ ಮೇಘವಾಲ್, ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಸೇರಿದಂತೆ ಇತರ ಗಣ್ಯರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ನಿನ್ನೆ ಮುಕ್ತಾಯಗೊಂಡ ಚುನಾವಣಾ ಆಯೋಗ ಆಯೋಜಿಸಿದ್ದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿದ್ದ ಚುನಾವಣಾ ನಿರ್ವಹಣಾ ಸಂಸ್ಥೆಗಳ ಮುಖ್ಯಸ್ಥರು ಹಾಗು ಪ್ರತಿನಿಧಿಗಳು ಸಹ ಇಂದಿನ ಸಮಾರಂಭದಲ್ಲಿ ಭಾಗವಹಿಸಿದ್ದರು. ರಾಷ್ಟ್ರೀಯ ಮತದಾರರ ದಿನದಂದು ಪ್ರಧಾನಿ ನರೇಂದ್ರ ಮೋದಿ ಇಂದು ದೇಶದ ಜನತೆಗೆ ಶುಭ ಹಾರೈಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಈ ದಿನ ಭಾರತದ ಚೈತನ್ಯಶೀಲ ಪ್ರಜಾಪ್ರಭುತ್ವವನ್ನು ಆಚರಿಸುವ ಮತ್ತು ಪ್ರತಿಯೊಬ್ಬ ನಾಗರಿಕನು ತಮ್ಮ ಮತದಾನದ ಹಕ್ಕನ್ನು ಸಂಭ್ರಮಿಸುವ ದಿನವಾಗಿದೆ. ಇದು ರಾಷ್ಟ್ರದ ಭವಿಷ್ಯವನ್ನು ರೂಪಿಸುವಲ್ಲಿ

ಭಾಗವಹಿಸುವಿಕೆಯ ಮಹತ್ವವನ್ನು ಎತ್ತಿ ತೋರುತ್ತದೆ ಎಂದು ತಿಳಿಸಿದ್ದಾರೆ. ಇದರ ಜತೆಗೆ ಪ್ರಧಾನಿ ಸಂವಿಧಾನದ ಕುರಿತು ಮಾತನಾಡಿದ ಮನ್ ಕಿ ಬಾತ್‌ನ ವಿಡಿಯೋ ತುಣುಕನ್ನು ಹಂಚಿಕೊಂಡಿದ್ದು, ಕಳೆದ ದಶಕಗಳಿಂದ ಭಾರತದಲ್ಲಿ ಪ್ರಜಾಪ್ರಭುತ್ವ ಬಲಗೊಳ್ಳುತ್ತಾ ಸಾಗಿದೆ ಎಂದಿದ್ದಾರೆ.

****ಧ್ವನಿ***ಪ್ರಧಾನಿ

**<><><><>**

ಗಣರಾಜ್ಯೋತ್ಸವ ದಿನದ ಮುನ್ನಾ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಸಂಜೆ ೭ ಗಂಟೆಗೆ ಅವರು, ಭಾಷಣ ಮಾಡಲಿದ್ದು ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಮೊದಲಿಗೆ ಹಿಂದಿ, ಆನಂತರ ಇಂಗ್ಲಿಷ್ ಅವತರಣಿಕೆ ಪ್ರಸಾರವಾಗಲಿದೆ. ಬಳಿಕ ಪ್ರಾದೇಶಿಕ ಭಾಷೆಗಳಲ್ಲೂ ರಾಷ್ಟ್ರಪತಿ ಭಾಷಣ ಮೂಡಿಬರಲಿದೆ. ರಾಷ್ಟ್ರೀಯ ಕಾರ್ಯಕ್ರಮಗಳಲ್ಲಿ ಸಾರ್ವಜನಿಕ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ಗುರಿಯ ಭಾಗವಾಗಿ ನಾಳೆ ನಡೆಯಲಿರುವ ಗಣರಾಜ್ಯೋತ್ಸವದ ಪರೇಡ್ ವೀಕ್ಷಿಸಲು ಸುಮಾರು ೧೦ ಸಾವಿರ ವಿಶೇಷ ಅತಿಥಿಗಳನ್ನು ಆಹ್ವಾನಿಸಲಾಗಿದೆ. ಇವರಲ್ಲಿ ಆಪ್ ದಾ ಮಿತ್ರ ಸ್ವಯಂಸೇವಕರು, ಆಶಾ ಕಾರ್ಯಕರ್ತೆಯರು, ಕೃಷಿಕರ ಉತ್ಪಾದನಾ ಸಂಸ್ಥೆ ಎಫ್‌ಪಿಒಗಳು, ಪಿಎಂ ಕಿಸಾನ್ ಸಮ್ಮಾನ್ ನಿಧಿ ಫಲಾನುಭವಿಗಳು, ಮೈಭಾರತ್ ಸ್ವಯಂಸೇವಕರು ಮತ್ತಿತರರು ಸೇರಿದ್ದಾರೆ. ಗಣರಾಜ್ಯೋತ್ಸವ ಸಮಾರಂಭವನ್ನು ಕಣ್ತುಂಬಿಕೊಳ್ಳಲು ಸಾರ್ವಜನಿಕರಿಗೆ ಅನುವು ಮಾಡಿಕೊಡುವುದಕ್ಕಾಗಿ ದೆಹಲಿ ಮೆಟ್ರೋ, ನಾಳೆ ಬೆಳಗ್ಗೆ ೩ ಗಂಟೆಯಿಂದಲೇ ತನ್ನ ಸೇವೆ ಆರಂಭಿಸಲಿದೆ. ಬೆಳಗ್ಗೆ ೬ ಗಂಟೆಯವರೆಗೆ ೩೦ ನಿಮಿಷಗಳ ಅಂತರದಲ್ಲಿ ರೈಲು ಸಂಚರಿಸಲಿದ್ದು, ಬಳಿಕ ಎಂದಿನ ವೇಳಾಪಟ್ಟಿಯನ್ನು ಅನುಸರಿಸಲಾಗುವುದು ಎಂದು ದೆಹಲಿ ಮೆಟ್ರೋ ಮಾಹಿತಿ ನೀಡಿದೆ.

**<><><><>**

ನವದೆಹಲಿಯಲ್ಲಿ ಇಂದು ಇಂಡೋನೇಷ್ಯಾ ಅಧ್ಯಕ್ಷ ಪ್ರಬವೊ ಸುಬಿಯಾಂತೊ, ಹಾಗೂ ಪ್ರಧಾನಿ ನರೇಂದ್ರ ಮೋದಿ ಭೇಟಿಯಾಗಿ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಪರಿಶೀಲನೆ ಮತ್ತು ವಿವಿಧ ಪ್ರಾದೇಶಿಕ ಹಾಗೂ ಜಾಗತಿಕ ಸಮಸ್ಯೆಗಳ ಕುರಿತು ಸಮಾಲೋಚನೆ ನಡೆಸಿದರು. ಇಂದು ಬೆಳಗ್ಗೆ ಇಂಡೋನೇಷ್ಯಾ ಅಧ್ಯಕ್ಷರಿಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರಪತಿ ಭವನದಲ್ಲಿ ಔಪಚಾರಿಕ ಸ್ವಾಗತ ಕೋರಿದರು. ನಾಲ್ಕು ದಿನಗಳ ಭಾರತ ಭೇಟಿಗಾಗಿ ಅಧ್ಯಕ್ಷ ಪ್ರಬವೊ ನಿನ್ನೆ ನವದೆಹಲಿಗೆ ಆಗಮಿಸಿದರು. ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವೆ ಪವಿತ್ರ ಮಾರ್ಗರೀಟಾ ನವದೆಹಲಿಯ ವಿಮಾನ ನಿಲ್ದಾಣದಲ್ಲಿ ಅವರನ್ನು ಬರಮಾಡಿಕೊಂಡರು. ಬಳಿಕ, ಇಂಡೋನೇಷ್ಯಾ ಅಧ್ಯಕ್ಷರು ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾದರು. ಕಳೆದ ಅಕ್ಟೋಬರ್‌ನಲ್ಲಿ ಇಂಡೋನೇಷ್ಯಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಭಾರತಕ್ಕೆ ಪ್ರಬವೊ ಅವರು ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

**<><><><>**

ಮುಂಬೈ ಭಯೋತ್ಪಾದನಾ ದಾಳಿಯ ಅಪರಾಧಿ ತಹವ್ವೂರ್ ರಾಣಾ ತಪ್ಪಿತಸ್ಥನೆಂದು ನೀಡಿರುವ ತೀರ್ಪಿನ ವಿರುದ್ಧ ಸಲ್ಲಿಕೆಯಾಗಿದ್ದ ಪರಿಶೀಲನಾ ಅರ್ಜಿಯನ್ನು ಅಮೆರಿಕದ ಸುಪ್ರೀಂಕೋರ್ಟ್ ವಜಾಗೊಳಿಸಿದೆ. ಆ ಮೂಲಕ ತಹವ್ವೂರ್‌ನನ್ನು ಭಾರತಕ್ಕೆ ಹಸ್ತಾಂತರಿಸುವ ಪ್ರಕ್ರಿಯೆಗೆ ಚಾಲನೆ ದೊರೆತಿದೆ. ೧೬೦ಕ್ಕೂ ಹೆಚ್ಚು ಜನರ ಪ್ರಾಣಹಾನಿಗೆ ಕಾರಣವಾಗಿದ್ದ ೨೦೦೮ರ ಮುಂಬೈ ಭಯೋತ್ಪಾದನಾ ದಾಳಿಯಲ್ಲಿ ಪ್ರಮುಖ ಪಾತ್ರವಹಿಸಿದ ಆರೋಪ ಹೊತ್ತಿರುವ ಪಾಕಿಸ್ತಾನ ಮೂಲದ ಕೆನಡಾ ವ್ಯಾಪಾರಿ ತಹವ್ವೂರ್ ಹಸ್ತಾಂತರಕ್ಕೆ ಭಾರತ ಕೋರಿತ್ತು. ಈ ಕ್ರಮದ ವಿರುದ್ಧ ತಮ್ಮ ಕೊನೆಯ ಪ್ರಯತ್ನವಾಗಿ ತಹವ್ವೂರ್, ಅಮೆರಿಕ ಸುಪ್ರೀಂಕೋರ್ಟ್‌ನಲ್ಲಿ ದಾವೆ ಹೂಡಿದ್ದರು, ಈಗ ಅದು ವಿಫಲವಾಗಿದೆ. ತಹವ್ವೂರ್ ಮುಂಬೈ ದಾಳಿಯ ಪ್ರಮುಖ ರೂವಾರಿ ಪಾಕಿಸ್ತಾನಿ ಮೂಲದ ಅಮೆರಿಕ ಭಯೋತ್ಪಾದಕ ಡೇವಿಡ್ ಕೋಲ್ಮನ್ ಹೆಡ್ಲಿಯೊಂದಿಗೆ ಸಂಪರ್ಕ ಹೊಂದಿರುವ ಶಂಕೆ ಇದೆ.

<><><><>

ವಿದೇಶಾಂಗ ವ್ಯವಹಾರಗಳ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಳೆಯಿಂದ ಎರಡು ದಿನಗಳ ಭೇಟಿಗಾಗಿ ಚೀನಾ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು ಭಾರತ-ಚೀನಾ ನಡುವೆ ವಿದೇಶಾಂಗ ಕಾರ್ಯದರ್ಶಿಗಳ ಕಾರ್ಯ ವಿಧಾನ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೇಟಿಯ ಭಾಗವಾಗಿ ತಮ್ಮ ಚೀನಾ ಸಹವರ್ತಿಯನ್ನು ಭೇಟಿಯಾಗಲಿದ್ದು, ಈ ವೇಳೆ ದ್ವಿಪಕ್ಷೀಯ ಹಿತಾಸಕ್ತಿಯ ವಿವಿಧ ಸಮಸ್ಯೆಗಳ ಕುರಿತು ಸಮಾಲೋಚಿಸಲಾಗುವುದು ಎಂದರು. ಅಕ್ರಮ ವಲಸೆ ಕುರಿತು ಅವರು ಮಾತನಾಡಿ ಅಕ್ರಮ ವಲಸೆ ಹಲವು ರೀತಿಯ ಸಂಘಟಿತ ಅಪರಾಧಗಳಿಗೆ ಸಂಬಂಧ ಹೊಂದಿದೆ. ಆದ್ದರಿಂದ ಭಾರತ ಇದನ್ನು ಖಂಡಿಸುತ್ತದೆ. ಭಾರತದ ಪ್ರಜೆಗಳು ಯಾವುದೇ ದೇಶದಲ್ಲಿ ಅವಧಿಗೂ ಮೀರಿ ಇದ್ದರೆ, ಅಥವಾ ನಿರ್ದಿಷ್ಟ ದಾಖಲೆಗಳಿಲ್ಲದೆ ನೆಲೆಸಿದ್ದರೆ, ಅಂತಹವರು ವಿದೇಶಾಂಗ ಸಚಿವಾಲಯದೊಂದಿಗೆ ತಮ್ಮ ದಾಖಲೆಗಳನ್ನು ಹಂಚಿಕೊಂಡರೆ ಭಾರತ ಸರ್ಕಾರ ಅವರನ್ನು ವಾಪಸ್ ಕರೆಸಿಕೊಳ್ಳಲಿದೆ ಎಂದು ಹೇಳಿದರು. ಭಾರತ-ಅಮೆರಿಕ ಸಂಬಂಧ ಪ್ರಬಲವಾಗಿದ್ದು, ಬಹುಮುಖಿಯಾಗಿದೆ. ಅದರಲ್ಲೂ ಆರ್ಥಿಕ ಸಂಬಂಧಗಳು ವಿಶೇಷತೆ ಹೊಂದಿವೆ, ಉಭಯ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ಮಾತುಕತೆ ಕೈಗೊಳ್ಳುವುದು ಉಭಯ ರಾಷ್ಟ್ರಗಳ ದೃಷ್ಟಿಕೋನವಾಗಿದೆ ಎಂದು ತಿಳಿಸಿದರು.

<><><><>

ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ದೇಶೀಯ ಮತ್ತು ಅಂತಾರಾಷ್ಟ್ರೀಯ ಭಕ್ತರು, ಯಾತ್ರಿಕರು ಹಾಗೂ ಸಂದರ್ಶಕರಿಗಾಗಿ ಆಯುಷ್ ಸಚಿವಾಲಯ ಉಚಿತ ಆರೋಗ್ಯ ಸೇವೆಗಳನ್ನು ಒದಗಿಸುತ್ತಿದ್ದು, ಇದುವರೆಗೆ ಒಂದು ಲಕ್ಷದ ೨೧ ಸಾವಿರಕ್ಕೂ ಹೆಚ್ಚು ಭಕ್ತರು ಆಯುಷ್ ಸೇವೆಗಳನ್ನು ಪಡೆದುಕೊಂಡಿರುವುದಾಗಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ೨೦ ಒಪಿಡಿ ಕೇಂದ್ರಗಳಲ್ಲಿ ದಿನವಿಡೀ ವೈದ್ಯಕೀಯ ಸೇವೆಗಳನ್ನು ಒದಗಿಸಲು ಮಹಾಕುಂಭದಲ್ಲಿ ೮೦ ಆಯುಷ್ ವೈದ್ಯರ

ತಂಡವನ್ನು ನಿಯೋಜಿಸಲಾಗಿದೆ. ಈ ಒಪಿಡಿಗಳು ಸಾಮಾನ್ಯ ಮತ್ತು ದೀರ್ಘಕಾಲದ ಆರೋಗ್ಯ ಸಂಬಂಧಿ ಸಮಸ್ಯೆಗಳನ್ನು ಪರಿಹರಿಸಲು ಸಜ್ಜಾಗಿವೆ. ವಿದೇಶಿ ಭಕ್ತರು ಕೂಡ ಒಪಿಡಿ ಸಮಾಲೋಚನೆ ಸೇರಿದಂತೆ ಆಯುಷ್ ಸೇವೆಗಳನ್ನು ಬಳಸುತ್ತಿದ್ದಾರೆ. ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆಯ ತರಬೇತುದಾರರ ನೇತೃತ್ವದಲ್ಲಿ ಸಂಗಮ್ ಪ್ರದೇಶದ ನಿಗದಿತ ಶಿಬಿರಗಳಲ್ಲಿ ಬೆಳಗಿನ ವೇಳೆ ಚಿಕಿತ್ಸಕ ತರಗತಿಗಳನ್ನು ನಡೆಸಲಾಗುತ್ತಿದೆ. ಸಚಿವಾಲಯವು ಭಕ್ತರಿಗೆ ರೋಗನಿರೋಧಕ ಶಕ್ತಿವರ್ಧಕ ಮತ್ತು ಕ್ಯಾಲ್ಸಿಯಂ ಮಾತ್ರೆಗಳು ಸೇರಿದಂತೆ ಉಚಿತ ಔಷಧಿಗಳನ್ನು ವಿತರಿಸುತ್ತಿದೆ. ಹಿರಿಯ ನಾಗರಿಕರ ಆರೋಗ್ಯದ ಕುರಿತು ವಿಶೇಷ ಗಮನ ಹರಿಸಲಾಗುತ್ತಿದ್ದು, ಮಹಾಕುಂಭದಲ್ಲಿ ಆಯುಷ್ ತಂಡವು ವೃದ್ಧರಿಗೆ ಅನುಕೂಲ ಕಲ್ಪಿಸಲು ಮತ್ತು ಆಯುಷ್ ಸೇವೆಗಳನ್ನು ಒದಗಿಸಲು ಸನ್ನದ್ಧವಾಗಿದೆ.

**<><><>**

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಎರಡನೇ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ ಮೊದಲನೇ ಪಂದ್ಯವನ್ನು ಗೆದ್ದು, ೫ ಪಂದ್ಯಗಳ ಸರಣಿಯಲ್ಲಿ ೧-೦ ಮುನ್ನಡೆ ಸಾಧಿಸಿದೆ.

**<><><>**

ಮೆಲ್ಬರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಗ್ರ್ಯಾನ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿಂದು ವಿಶ್ವ ಅಗ್ರ ಶ್ರೇಯಾಂಕಿತ ಆಟಗಾರ್ತಿ ಬೆಲಾರಸ್‌ನ ಅರಿನಾ ಸಬಲೆಂಕಾ, ಅಮೆರಿಕದ ಮ್ಯಾಡಿಸನ್ ಕೀಸ್ ಅವರನ್ನು ಎದುರಿಸಲಿದ್ದಾರೆ.

ಮತ್ತೊಂದೆಡೆ ಪುರುಷರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿಂದು ಬ್ರಿಟನ್‌ನ ಹೆನ್ರಿ ಪಟ್ಟೆನ್ ಮತ್ತು ಫಿನ್‌ಲ್ಯಾಂಡ್‌ನ ಹ್ಯಾರಿ ಹೆಲಿಯೋವಾರ್ ಜೋಡಿ, ಇಟಲಿಯ ಸಿಮಾನ್ ಬೊಲೆಲ್ಲಿ ಮತ್ತು ಆಂಡ್ರಿಯ ವವಸ್ಸರಿ ಜೋಡಿಯನ್ನು ಎದುರಿಸಲಿದೆ. ಇನ್ನು ಪುರುಷರ ಸಿಂಗಲ್ಸ್‌ನಲ್ಲಿ, ಇಟಲಿಯ ಜನಿಕ್ ಸಿನ್ನರ್ ಮತ್ತು ಜರ್ಮನಿಯ ಅಲೆಗ್ಸಾಂಡರ್ ಜ್ವೆರೆವ್ ನಾಳೆ ನಡೆಯಲಿರುವ ಪಂದ್ಯದಲ್ಲಿ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ. ನಾಳೆ ನಡೆಯಲಿರುವ ಮಹಿಳಾ ಡಬಲ್ಸ್ ಫೈನಲ್‌ನಲ್ಲಿ ಅಮೆರಿಕದ ಟೇಲರ್ ಟೌನ್‌ಸೆಂಡ್ ಮತ್ತು ಝೆಕ್ ಗಣರಾಜ್ಯದ ಕೆಟರಿನಾ ಸಿನಿಯಾಕೋವಾ ಜೋಡಿ ತೈವಾನ್‌ನ ಸೀಹ್ ಸು ವಿ ಹಾಗೂ ಲಾಟ್ವಿಯಾದ ಜೆಲೆನಾ ಆಸ್ಟಾಪೆಂಕೊ ಜೋಡಿಯ ವಿರುದ್ಧ ಸೆಣಸಲಿದೆ.

**<><><>**

ಒಡಿಶಾದ ರೂರ್ಕೆಲಾದಲ್ಲಿ ಇಂದು ಸಂಜೆ ನಡೆಯಲಿರುವ ಪುರುಷರ ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ತಮಿಳುನಾಡು ಡ್ರ್ಯಾಗನ್ಸ್ ಮತ್ತು ಗೋನಾಸಿಕಾ ತಂಡಗಳು ಮುಖಾಮುಖಿಯಾಗಲಿವೆ. ಮತ್ತೊಂದು ಪಂದ್ಯದಲ್ಲಿ ಹೈದ್ರಾಬಾದ್ ತೂಫಾನ್ಸ್, ಯುಪಿ ರುದ್ರಾಸ್ ವಿರುದ್ಧ ಸೆಣಸಲಿದೆ.

**<><><>**

ದೇಶದ ಮೊದಲ ಸಹಕಾರಿ ವಿಶ್ವವಿದ್ಯಾಲಯ ತ್ರಿಭುವನ ದಾಸ್ ಪಟೇಲ್ ಸಹಕಾರಿ ವಿಶ್ವವಿದ್ಯಾಲಯವನ್ನು ಶೀಘ್ರದಲ್ಲೇ ಸ್ಥಾಪಿಸಲಾಗುವುದು ಹಾಗೂ ಮುಂಬರುವ ಬಜೆಟ್‌ನಲ್ಲಿ ಈ ಕುರಿತು ಘೋಷಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಮಹಾರಾಷ್ಟ್ರದ ಮುಂಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಸಹಕಾರಿ ವರ್ಷ ೨೦೨೫ರ ಉದ್ಘಾಟನಾ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಸಹಕಾರಿ ಸಂಘಗಳು ಶಿಸ್ತು ಮತ್ತು ವೃತ್ತಿಪರತೆಯನ್ನು ಕಾಪಾಡಿಕೊಳ್ಳುವ ಅಗತ್ಯವಿದೆ. ಸಹಕಾರದಿಂದ ಸಮೃದ್ಧಿ ಸಾಧಿಸಲು ಈ ಕ್ಷೇತ್ರದ ಸಮಗ್ರ ಬೆಳವಣಿಗೆ ಪ್ರಮುಖವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಚಿವರು, ರಾಷ್ಟ್ರೀಯ ನಗರ ಸಹಕಾರಿ ಮತ್ತು ಅಭಿವೃದ್ಧಿ ಸಹಕಾರಿ ನಿಗಮ - ಎನ್‌ಯುಸಿಎಫ್‌ಡಿಸಿಯ ನೂತನ ಕಾರ್ಪೊರೇಟ್ ಕಚೇರಿಯನ್ನು ಉದ್ಘಾಟಿಸುವ ಜತೆಗೆ ೨೦೨೫ರ ಅಂತಾರಾಷ್ಟ್ರೀಯ ಸಹಕಾರ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.